ಈ) ಗ್ರಾಮಾಂತರ ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸಲು ಇಚ್ಚಿಸುವ ವೈದ್ಯರಿಗೆ ಹೆಚ್ಚಿನ ಸೌಲಭ್ಯ ಹಾಗೂ ಭತ್ಯೆಗಳನ್ನು ನೀಡುವ ಬಗ್ಗೆ ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ?

ಶ್ರೀ ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕಲ್ಯಾಣ ಸಚಿವರು) :

ಅ) ಖಾಲಿ ಇರುವ ವೈದ್ಯರ ಹುದ್ದೆಗಳು - 733

ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ವೈದ್ಯರುಗಳು - 722

ಆ) ಗ್ರಾಮಾಂತರ ಪ್ರದೇಶಗಳಲ್ಲಿ ಖಾಲಿ ಇರುವ ಸಾಮಾನ್ಯ ಕರ್ತವ್ಯ ವೈದ್ಯರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿ ಭರ್ತಿ ಮಾಡಲು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಿ ಕ್ರಮ ಕೈಗೊಳ್ಳಲಾಗಿದೆ.

ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ 464 ಖಾಲಿ ಇರುವ ವೈದ್ಯರ ಹುದ್ದೆಗಳನ್ನು 1998ರ ಸಾರ್ವತ್ರಿಕ ವರ್ಗಾವಣೆ ಸಮಯದಲ್ಲಿ ತುಂಬಲು ಕ್ರಮಕೈಗೊಳ್ಳಲಾಗುವುದು ಮತ್ತು ಸ್ನಾತಕೋತ್ತರ ವ್ಯಾಸಂಗವನ್ನು ಪೂರೈಸಿ ನೇಮಕಾತಿ ನಿರೀಕ್ಷಣೆಯಲ್ಲಿರುವ ವೈದ್ಯರುಗಳನ್ನು ನೇಮಕ ಮಾಡುವ ಮೂಲಕ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಇ) ಬಂದಿದೆ. ಶೇಕಡಾ 29ರಷ್ಟು (ಅಂದರೆ 176 ವೈದ್ಯರು) ಹಾಜರಾಗಿರುವುದಿಲ್ಲ.

ಈ) ಗ್ರಾಮಾಂತರ ಪ್ರದೇಶದಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ವೈದ್ಯರಿಗೆ ಮಾಸಿಕ ವೇತನವನ್ನು ರೂ. 4000 ದಿಂದ ರೂ. 6000 ಗೆ ಹೆಚ್ಚಿಸಲಾಗಿದೆ. ಖಾಯಂ ವೈದ್ಯರಿಗೆ ಸೌಲಭ್ಯ ನೀಡುವ ವಿಷಯ ಪರಿಶೀಲನೆಯಲ್ಲಿರುವುದಿಲ್ಲ.

ಸಕಲೇಶಪುರ ತಾಲ್ಲೂಕು ಉಚ್ಚಂಗಿ ಗ್ರಾಮಕ್ಕೆ ಆಸ್ಪತ್ರೆ ಮಂಜೂರಾತಿ.

1618 - ಶ್ರೀ ಬಿ.ಬಿ. ಶಿವಪ್ಪ (ಸಕಲೇಶಪುರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಕಲೇಶಪುರ ತಾಲ್ಲೂಕು ಉಚ್ಚಂಗಿ ಗ್ರಾಮಕ್ಕೆ 10 ಹಾಸಿಗೆಗಳ ಆಸ್ಪತ್ರೆಗೆ ಸರ್ಕಾರದವರು ಮಂಜೂರಾತಿ ನೀಡಿದ್ದಾರೆಯೇ?

ಆ) ಹಾಗಿದ್ದಲ್ಲಿ ಅದಕ್ಕಾಗಿ ಈ ಆಸ್ಪತ್ರೆಗೆ ಸರ್ಕಾರದವರು ಇದುವರೆಗೆ ಬಿಡುಗಡೆ ಮಾಡಿರುವ ಹಣ ಎಷ್ಟು?

ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.